**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.69/2021**

ಪಿ.ಡಬ್ಲ್ಯೂಃ **7**

ಸಿ.ಡಬ್ಲ್ಯೂಃ 13

| | | |
|---|---|---|
| ಹೆಸರು | ಃ | ಮೇಘ ಟಿ ಎನ್ |
| ಗಂಡನ ಹೆಸರು | ಃ | ನಾಗರಾಜ್ ಹನುವಾಗನ್ |
| ವಯಸ್ಸು | ಃ | 32 ವರ್ಷ |
| ಉದ್ಯೋಗ | ಃ | ರಾಜ್ಯ ಗುಪ್ತ ವಾರ್ತ ಘಟಕ |
| ವಾಸಸ್ಥಳ | ಃ | ಚಿತ್ರದುರ್ಗ |

**ದಿನಾಂಕಃ 16-06-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಸ.ಸ.ಅ. ರವರಿಂದ.**

ನಾನು ದಿಃ**08-01-2021** ರಿಂದ **19-01-2022** ರವರೆಗೆ ಲಕ್ಕವಳ್ಳಿ **ಪೋಲೀಸ್ ಠಾಣೆಯಲ್ಲಿ** ಪಿ ಎಸ್ ಐ **ಆಗಿ ಕರ್ತವ್ಯ** ನಿರ್ವಹಿಸಿರುತ್ತೇನೆ.

ದಿನಾಂಕಃ 10-07-2020 ರಂದು ಹಿರಿಯ ಭೂ ವಿಜ್ಞಾನ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಚಿಕ್ಕಮಗಳೂರು ರವರಿಂದ ವರದಿಯನ್ನು ಸ್ವೀಕರಿಸಿ, ನಂತರ ಚಾಸಾ-6 ರವರಿಂದ 17-07-2020 ರಂದು ವರದಿಯನ್ನು ಸ್ವೀಕರಿಸಿ, ಆರೋಪಿ ಮೇಲೆ ಆರೋಪ ಸಾಬೀತಾದ ಕಾರಣ ಆರೋಪಿ ವಿರುದ್ದ ದೋಷರೋಪಣಾ ಪಟ್ಟಿಯನ್ನು ತಯಾರಿಸಿ, ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಹಿರಿಯ ಭೂ ವಿಜ್ಞಾನ ಅಧಿಕಾರಿಗಳು, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಇವರಿಂದ ಪಡೆದ ವರದಿ ಆಗಿದ್ದು, ಸದರಿ ದಾಖಲೆಯನ್ನು ನಿಪಿ-13 ಎಂದು, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸಹಾಯಕ ಕಾರ್ಯಪಾಲಕ ಅಭಿಯಂತರರು, ತರೀಕೆರೆ ರವರಿಂದ ಪಡೆದ ವರದಿ ಆಗಿದ್ದು, ಸದರಿ ದಾಖಲೆಯನ್ನು ನಿಪಿ-14 ಎಂದು, ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು ಃ ಆರೋಪಿತರ ಪರ</u>** <u>ಶ್ರೀ ಕೆಪಿ</u> **<u>ವಕೀಲರಿಂದ.</u>**

ಆರೋಪಿ ಯಾವುದೆ ತಪ್ಪು ಮಾಡದೇ ಇದ್ದರೂ ಸಹ ಆರೋಪಿಯ ಮೇಲೆ ಸುಳ್ಳು ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತಿರಾ ಎಂದರೆ ಸರಿಯಲ್ಲ.

**<u>ಮರುವಿಚಾರಣೆ</u>ಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

1 ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**